# ಕರ್ನಾಟಕ ವಿಧಾನ ಪರಿಷತ್ತು

(9)

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 24 (235 ಮತ್ತು 240)
2. ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) ಹಾಗೂ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
3. ಉತ್ತರಿಸುವ ದಿನಾಂಕ : 14.12.2021
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಸೋಮನಹಳ್ಳಿ ಕೈಗಾರಿಕಾ ಪ್ರದೇಶ ನಿರ್ಮಾಣಕ್ಕಾಗಿ ಭೂಸ್ವಾಧೀನಕ್ಕೊಳಪಟ್ಟಿರುವ ಸರ್ವೆ ನಂ: 29ರಲ್ಲಿ ಅನಧಿಕೃತವಾಗಿ ಖಾಸಗಿ ವ್ಯಕ್ತಿಗಳು ವಸತಿ ಬಡಾವಣೆ ನಿರ್ಮಿಸಿ, ನಿವೇಶನಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಸೋಮನಹಳ್ಳಿ ಕೈಗಾರಿಕಾ ಪ್ರದೇಶಕ್ಕಾಗಿ ಭೂಸ್ವಾಧೀನಪಡಿಸಿರುವ ಜಮೀನುಗಳ ಪೈಕಿ ಸೋಮನಹಳ್ಳಿ ಗ್ರಾಮದ ಸರ್ವೆ ನಂ: 29 ರಲ್ಲಿನ 3-16 ಎಕರೆ ಸರ್ಕಾರಿ ಜಮೀನು ಸಹ ಒಳಗೊಂಡಿರುತ್ತದೆ.<br>ಈ ಜಮೀನನ್ನು ಮಂಡಳಿಗೆ ಮಂಜೂರು ಮಾಡುವ ಸಂಬಂಧ ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ ಇವರು ದಿನಾಂಕ: 24.11.2000 ರಂದು ಹೊರಡಿಸಿರುವ ಅಧಿಕೃತ ಜ್ಞಾಪನ ಪತ್ರದಲ್ಲಿ ತಿಳಿಸಿರುವಂತೆ, ಪ್ರಸ್ತಾವಿತ ಜಮೀನಿನ ಮಾರುಕಟ್ಟೆ ಬೆಲೆ, ಪರಿವರ್ತನಾ ಶುಲ್ಕ ಮತ್ತು ಪೋಡಿ ಶುಲ್ಕ ಸೇರಿ ಒಟ್ಟು ರೂ.2,37,239/-ಗಳನ್ನು ದಿನಾಂಕ: 29.10.2004 ರಂದು ತಹಶೀಲ್ದಾರ್, ಮದ್ದೂರು ತಾಲ್ಲೂಕು ಇವರಿಗೆ ಜಮಾ ಮಾಡಲಾಗಿದೆ.<br>ಈ ಸರ್ಕಾರಿ ಜಮೀನು ಈಗಾಗಲೇ ಕೆ.ಐ.ಎ.ಡಿ.ಬಿ.ಗೆ ಮಂಜೂರಾಗಿದ್ದು, ಜಮೀನನ್ನು ಭೌತಿಕವಾಗಿ ಕೆ.ಐ.ಎ.ಡಿ.ಬಿ.ಗೆ ಹಸ್ತಾಂತರಿಸುವಂತೆ ವಿಶೇಷ ಭೂಸ್ವಾಧೀನಾಧಿಕಾರಿ, ಮೈಸೂರು ಇವರು ತಹಶೀಲ್ದಾರ್, ಮದ್ದೂರು ತಾಲ್ಲೂಕು ಇವರಿಗೆ ಬರೆದ ದಿನಾಂಕ: 06.11.2019 ರ ಪತ್ರದಲ್ಲಿ ಕೋರಿದ್ದು, ಸದರಿ ಜಮೀನು ಕಂದಾಯ ಇಲಾಖೆಯಿಂದ ಭೌತಿಕವಾಗಿ ಮಂಡಳಿಗೆ ಹಸ್ತಾಂತರವಾಗಲು ಬಾಕಿಯಿದ್ದು, ಈ ಜಮೀನಿನಲ್ಲಿ ಅಕ್ರಮವಾಗಿ ಖಾಸಗಿ ಮಾಲೀಕತ್ವದಲ್ಲಿ ಬಡಾವಣೆಗಳು ನಿರ್ಮಾಣಗೊಳ್ಳುವುದನ್ನು |
| (ಆ) | ಹಾಗಾದಲ್ಲಿ, ಎಷ್ಟು ಎಕರೆ ವಿಸ್ತೀರ್ಣದಲ್ಲಿ ಅನಧಿಕೃತ ಬಡಾವಣೆಗಳನ್ನು ನಿರ್ಮಿಸಲಾಗಿದೆ; | |
| (ಇ) | ಅನಧಿಕೃತ ಬಡಾವಣೆ ನಿರ್ಮಾಣದಲ್ಲಿ ಕೆ.ಐ.ಎ.ಡಿ.ಬಿ. ಅಧಿಕಾರಿಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |